**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ**
**ನ್ಯಾಯಾಲಯ, ಕನಕಪುರ**

**<u>ಸಿ.ಸಿ ನಂ. 1179/2019</u>**

ದಿನಾಂಕಃ**. 21.02.2026.** ರಂದು ಸಾಕ್ಷಿಗೆ ಮದ್ಯಾಹ್ನ **12.30** ಗಂಟೆಗೆ ಪ್ರಮಾಣ ವಚನ ಭೋದಿಸಲಾಯಿತು.

| ಚಾಸಾ-**1** | ಪ್ರಾಸಾ-**1** |
|---|---|
| ಹೆಸರು | - ದೇವರಾಜು |
| ತಂದೆ ಹೆಸರು | - ಪಾಪಣ್ಣ |
| ವಯಸ್ಸು | - **44** |
| ಉದ್ಯೋಗ | - ವ್ಯವಸಾಯ |
| ವಿಳಾಸ | - ಹೊನ್ನಿಗಾನಹಳ್ಳಿ |

**<u>ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-</u>**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಪರಿಚಯ. ಚಾಸಾ-**2** ರಿಂದ **4** ನನ್ನ ದೊಡ್ಡಪ್ಪನ ಮಕ್ಕಳು, ಚಾ.ಸಾ. **5** ಮತ್ತು **6** ಗ್ರಾಮಸ್ಥರು.

ಆರೋಪಿ ಮತ್ತು ನನ್ನ ನಡುವೆ ಗಲಾಟೆ ಆಗಿರುವುದಿಲ್ಲ. ಬಾಯಿ ಮಾತಿನ ಗಲಾಟೆ ವಿಚಾರಕ್ಕೆ ಠಾಣೆಗೆ ಹೋದಾಗ ಪೊಲೀಸರು ಬಿಳಿ ಹಾಳೆಗಳ ಮೇಲೆ ನನ್ನ ಸಹಿಯನ್ನು ಪಡೆದುಕೊಂಡಿದ್ದರು.

ಸಾಕ್ಷಿ ಒಂದು ದೂರನ್ನು ನೋಡಿ ಅದರಲ್ಲಿರುವ ಒಂದು ಸಹಿಯನ್ನು ನೋಡಿ ತನ್ನ ಸಹಿ ಮತ್ತು ದೂರು ಎಂದು ಗುರುತಿಸಿದ್ದು, ಸದರಿ **ದೂರನ್ನು** ನಿಪಿ-**1** ಎಂದು, ಸಾಕ್ಷಿ ಸಹಿಯನ್ನು ನಿಪಿ-**1(ಎ)** ಎಂದು ಗುರುತಿಸಲಾಯಿತು.

ಸಾಕ್ಷಿ ಅಮಾನತ್ತು ಪಂಚನಾಮೆಯನ್ನು ನೋಡಿ ಅದರಲ್ಲಿರುವ ಒಂದು ಸಹಿಯನ್ನು ನೋಡಿ ತನ್ನ ಸಹಿ ಮತ್ತು ಅಮಾನತ್ತು ಪಂಚನಾಮೆ ಎಂದು ಗುರುತಿಸಿದ್ದು, ಸದರಿ ಅಮಾನತ್ತು **ಪಂಚನಾಮೆಯನ್ನು** ನಿಪಿ-**2** ಎಂದು, ಸಾಕ್ಷಿ ಸಹಿಯನ್ನು ನಿಪಿ-**2(ಎ)** ಎಂದು ಗುರುತಿಸಲಾಯಿತು.

ಪೊಲೀಸರು ನನ್ನ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ ಮತ್ತು ಏನನ್ನು ವಶಪಡಿಸಿಕೊಂಡಿರುವುದಿಲ್ಲ.

ನಾನು ಪೊಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

<u>ಪಾಟೀ ಸವಾಲುಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>

ದಿ. **19.08.2017** ರಂದು ಮದ್ಯಾಹ್ನ **2** ಗಂಟೆ ಸಮಯದಲ್ಲಿ ಹೊನ್ನಿಗಾನಹಳ್ಳಿ ಗ್ರಾಮ ಪುಟ್ಟಸ್ವಾಮಿ ಬಿನ್. ದೇಶೀಗೌಡರವರ ಮನೆಯ ಮುಂದೆ ನಾನು ಮತ್ತು ಚಾ.ಸಾ. **2** ರವರು **8** ತಿಂಗಳ ಹಿಂದೆ **1** ನೇ ಆರೋಪಿಗೆ **2** ವರೆ ಲಕ್ಷ ಹಣ ಕೊಟ್ಟ ಬಗ್ಗೆ ಮಾತನಾಡುವ ವಿಚಾರವಾಗಿ ಅಲ್ಲಿಗೆ ಹೋದಾಗ **1** ರಿಂದ **3** ನೇ ಆರೋಪಿತರು ನನಗೆ ಅವಾಚ್ಯ ಶಬ್ದಗಳಿಂದ ಬೈದು **2** ಮತ್ತು **3** ನೇ ಆರೋಪಿತರು ನನ್ನನ್ನು ತಬ್ಬಿ ಹಿಡಿದುಕೊಂಡಿದ್ದು **1** ನೇ ಆರೋಪಿ ಕೈಯಲ್ಲಿ ಕಲ್ಲನ್ನು ಹಿಡಿದುಕೊಂಡು ನನ್ನ ಮುಖಕ್ಕೆ ಹೊಡೆದಿದ್ದರಿಂದ ದವಡೆ ಹಲ್ಲು ಮುರಿದಿದ್ದು ಸಾಮಾನ್ಯ ಮತ್ತು ತೀವ್ರಸ್ವರೂಪವಾದ ಗಾಯಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ನಿ.ಪಿ.**1** ರಂತೆ ದೂರು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ದಿ.**25.08.2017** ರಂದು ನನ್ನ ಹಾಗೂ ಚಾಸಾ-**4** ಮತ್ತು **7** ರವರ ಸಮಕ್ಷಮ ಪೊಲೀಸರು ನಿಪಿ- **2** ರ ಪ್ರಕಾರ ಬೆಳಗ್ಗೆ **10** ಗಂಟೆಯಿಂದ **10.30** ಗಂಟೆವರೆಗೆ ಪಂಚನಾಮೆ ಮಾಡಿ ಒಂದು ದವಡೆ ಹಲ್ಲು ಮತ್ತು ಕಲ್ಲನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ.

ಸಾಕ್ಷಿಗೆ ದಿಃ **25.08.2017** ರಂದು ಅವನು ಪೊಲೀಸರಿಗೆ ನೀಡಿದ ಎಂಬ ಮರು ಹೇಳಿಕೆಯ ಭಾಗವಾದ "ದಿ.**20.08.2017…….**ಮರುಹೇಳಿಕೆ ನೀಡಿರುತ್ತೇನೆ

", ಓದಿ ಹೇಳಿದಾಗ ಅಲ್ಲಗಳೆದಿದ್ದರಿಂದ ಸದರಿ ಹೇಳಿಕೆ ಭಾಗವನ್ನು **ನಿಪಿ-3** ಎಂದು ಗುರುತಿಸಲಾಯಿತು.

ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿರುವ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ಶ್ರೀ. ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಮದ್ಯಾಹ್ನ **12.30** ಗಂಟೆಯವರೆಗೆ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**